**National**
**Kannada**
**10.12.2024 / 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಏಳನೇ ಆವೃತ್ತಿಯ 'ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್'ಗೆ ನಾಳೆ ಚಾಲನೆ

೨. ಪ್ರತಿಪಕ್ಷಗಳ ಗದ್ದಲ ಉಭಯ ಸದನಗಳ ಕಲಾಪ ದಿನದಮಟ್ಟಿಗೆ ಮುಂದೂಡಿಕೆ

೩. ದೇಶಾದ್ಯಂತ ಇಂದು ಮಾನವ ಹಕ್ಕುಗಳ ದಿನ ಆಚರಣೆ

೪. ೨೦೨೫ ರಿಂದ ಕಂಪ್ಯೂಟರ್ ಆಧಾರಿತವಾಗಿ ಸಿಯುಇಟಿ-ಯುಜಿ ಪರೀಕ್ಷೆ

<><*<><>*><>

ಏಳನೇ ಆವೃತ್ತಿಯ 'ಸ್ಮಾರ್ಟ್ ಇಂಡಿಯಾ ಹ್ಯಾಕಾಥಾನ್' ಇದೇ ೧೧ ರಂದು ದೇಶದ್ಯಾಂತ ೫೧ ಕೇಂದ್ರಗಳಲ್ಲಿ ಪ್ರಾರಂಭವಾಗಲಿದೆ. ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಈ ಕಾರ್ಯಕ್ರಮವನ್ನು ವರ್ಚುವಲ್ ಮೂಲಕ ಉದ್ಘಾಟಿಸಲಿದ್ದಾರೆ. ಕರ್ನಾಟಕದ ೯ ಶಿಕ್ಷಣ ಸಂಸ್ಥೆಗಳಲ್ಲಿ ಹ್ಯಾಕಥಾನ್ ಆಯೋಜಿಸಲಾಗಿದೆ. ಬೆಂಗಳೂರಿನ ಎಂ.ಎಸ್.ರಾಮಯ್ಯ ಯೂನಿವರ್ಸಿಟಿ ಆಫ್ ಅಪ್ಲೈಡ್ ಸೈನ್ಸಸ್, ಡಾನ್ ಬಾಸ್ಕೊ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಮತ್ತು ನ್ಯೂ ಹಾರಿಜಾನ್ ಕಾಲೇಜ್ ಆಫ್ ಎಂಜಿನಿಯರಿಂಗ್, ಮೈಸೂರಿನ ವಿದ್ಯಾವರ್ಧಕ ಕಾಲೇಜ್ ಆಫ್ ಎಂಜಿನಿಯರಿಂಗ್ ಮತ್ತು ನ್ಯಾಷನಲ್ ಇನ್ಸ್‌ಟಿಟ್ಯೂಟ್ ಆಫ್ ಎಂಜಿನಿಯರಿಂಗ್, ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಮಂಗಳೂರಿನ ಸಹ್ಯಾದ್ರಿ ಕಾಲೇಜ್ ಆಫ್ ಎಂಜಿನಿಯರಿಂಗ್ ಅಂಡ್ ಮ್ಯಾನೇಜ್‌ಮೆಂಟ್, ಸೂರತ್ಕಲ್‌ನ ನ್ಯಾಷನಲ್ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಮತ್ತು ಹುಬ್ಬಳ್ಳಿಯ ಕೆಎಲ್ಇ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಹ್ಯಾಕಾಥಾನ್ ನಡೆಯಲಿದೆ. ವಿದ್ಯಾರ್ಥಿಗಳಿಗೆ ಅವರ ದಿನನಿತ್ಯದ ಜೀವನದಲ್ಲಿ ಎದುರಾಗುವ ಪ್ರಮುಖ ಸಮಸ್ಯೆಗಳ ಪರಿಹಾರವನ್ನು ಕಂಡು ಹಿಡಿಯಲು ವೇದಿಕೆಯನ್ನು ಒದಗಿಸುವ ಈ ರಾಷ್ಟ್ರೀಯ ಹಬ್ಬವು, ಉತ್ಪಾದಕತೆ, ನಾವೀನ್ಯತೆ ಮತ್ತು ಸಮಸ್ಯೆ ಪರಿಹಾರ ಮನೋಭಾವವನ್ನು ಪ್ರೇರೇಪಿಸುತ್ತದೆ. ಹಿಂದಿನ ಆವೃತ್ತಿಗಳಂತೆ ವಿದ್ಯಾರ್ಥಿ ತಂಡಗಳು, ಸಚಿವಾಲಯಗಳು, ಇಲಾಖೆಗಳು ಮತ್ತು ಕೈಗಾರಿಕೆಗಳಿಂದ ನೀಡಲಾದ ಸಮಸ್ಯೆಗಳ ಮೇಲೆ ಕಾರ್ಯನಿರ್ವಹಿಸುತ್ತದೆ ಮತ್ತು ೧೭ ಧ್ಯೇಯ ವಾಕ್ಯಗಳ ಪೈಕಿ ಒಂದರಲ್ಲಿ ವಿದ್ಯಾರ್ಥಿ ನಾವೀನ್ಯತೆ ವಿಭಾಗಗಳು ತಮ್ಮ ಆಲೋಚನೆಗಳನ್ನು ಪ್ರಸ್ತುತಪಡಿಸಲಿವೆ. ಈ ವರ್ಷ, ೫೪ ಸಚಿವಾಲಯಗಳು, ಇಲಾಖೆಗಳು, ರಾಜ್ಯ ಸರ್ಕಾರಗಳು, ಸಾರ್ವಜನಿಕ ವಲಯದ ಘಟಕಗಳು ಮತ್ತು ಕೈಗಾರಿಕೆಗಳು ೨೫೦ಕ್ಕೂ ಹೆಚ್ಚು ಸಮಸ್ಯೆಗಳ ಪಟ್ಟಿಯನ್ನು ಸಲ್ಲಿಸಿವೆ. ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ೨೦೨೪ ರ ಅಂತಿಮ ಸುತ್ತಿನಲ್ಲಿ ಯುವ ನವೋದ್ಯಮಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಅಂತಿಮ ಸುತ್ತಿನಲ್ಲಿ ೧ ಸಾವಿರದ ೩೦೦ ಕ್ಕೂ ಹೆಚ್ಚು ವಿದ್ಯಾರ್ಥಿ ತಂಡಗಳು ಭಾಗವಹಿಸಲಿವೆ. ಈ ಸಂದರ್ಭದಲ್ಲಿ ಪ್ರಧಾನಮಂತ್ರಿ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

<><*<><>*><>

ಸಂಸತ್ತಿನ ಉಭಯ ಸದನಗಳಲ್ಲಿ ಪ್ರತಿಪಕ್ಷಗಳ ಗದ್ದಲ ಇಂದು ಕೂಡ ಮುಂದುವರೆದಿದ್ದು, ಲೋಕಸಭೆ ಮತ್ತು ರಾಜ್ಯಸಭೆ ಕಲಾಪವನ್ನು ದಿನದ ಮಟ್ಟಿಗೆ ಮುಂದೂಡಲಾಗಿದೆ. ಕಲಾಪ ಆರಂಭವಾಗುತ್ತಿದ್ದಂತೆಯೇ ಆಡಳಿತ ಮತ್ತು ಪ್ರತಿಪಕ್ಷಗಳು ಪರಸ್ಪರ ಆರೋಪ ಮತ್ತು ಪ್ರತ್ಯಾರೋಪಗಳಲ್ಲಿ ತೊಡಗಿದರು.

ಭಾರತದ ಭದ್ರತೆಯನ್ನು ಅಪಾಯದಲ್ಲಿಟ್ಟು ಕಾಂಗ್ರೆಸ್ ನಾಯಕರು, ಅಮೆರಿಕ ಮೂಲದ ಪ್ರಮುಖ ಪ್ರತಿಷ್ಠಾನದೊಂದಿಗೆ ಸಂಪರ್ಕ ಹೊಂದಿದ್ದಾರೆ ಎಂದು ಆಡಳಿತ ಪಕ್ಷದ ನಾಯಕರು ಆರೋಪಿಸಿದರು. ಮತ್ತೊಂದೆಡೆ ವಿರೋಧ ಪಕ್ಷದ ಸದಸ್ಯರು ಪ್ರಮುಖ ಭಾರತೀಯ ಉದ್ಯಮ ಸಂಸ್ಥೆಯ ವಿರುದ್ಧ ಲಂಚದ ಆರೋಪದ ಕುರಿತು ಚರ್ಚಿಸಲು ಪಟ್ಟು ಹಿಡಿದರು.

<><*<><>*><>

ದೇಶದ ೩೧೦ ಜಿಲ್ಲೆಗಳಲ್ಲಿ ಸ್ಥಳ ನಿರ್ದಿಷ್ಟ ಹವಾಮಾನ ಸ್ಥಿತಿಸ್ಥಾಪಕತ್ವ ಬೆಳೆಗಳು ಮತ್ತು ತಳಿಗಳನ್ನು ಪರಿಚಯಿಸಲಾಗಿದೆ ಎಂದು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ ಲೋಕಸಭೆಯಲ್ಲಿ ತಿಳಿಸಿದೆ. ಈ ೩೧೦ ಜಿಲ್ಲೆಗಳ ಪೈಕಿ ೨೦೧ ಜಿಲ್ಲೆಗಳು ಹವಾಮಾನ ಬದಲಾವಣೆಗೆ ಹೆಚ್ಚು ಒಳಗಾಗುತ್ತವೆ. ಹವಾಮಾನ ವೈಪರಿತ್ಯಗಳೊಂದಿಗೆ ೬೫೧ ಜಿಲ್ಲೆಗಳಿಗೆ ಜಿಲ್ಲಾ ಕೃಷಿ ಯೋಜನೆಗಳನ್ನು ಸಿದ್ದಪಡಿಸಲಾಗಿದೆ ಎಂದು ಸಚಿವಾಲಯ ಮಾಹಿತಿ ನೀಡಿದೆ. ೨೮ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನು ಒಳಗೊಂಡಂತೆ ನಿರ್ದಿಷ್ಟ ಹವಾಮಾನ ಸ್ಥಿತಿಸ್ಥಾಪಕ ತಂತ್ರಜ್ಞಾನ ಪ್ರದರ್ಶಿಸಿದ ೪೪೮ ಸ್ಥಳಗಳಲ್ಲಿ ಹವಾಮಾನ ಸ್ಥಿತಿಸ್ಥಾಪಕ ಗ್ರಾಮಗಳ ಪರಿಕಲ್ಪನೆಯನ್ನು ಪ್ರಾರಂಭಿಸಲಾಗಿದೆ. ಇದೇ ವೇಳೆ ಹವಾಮಾನ ಬದಲಾವಣೆಯ ವಿವಿಧ ಅಂಶಗಳ ಕುರಿತು ರೈತರಿಗೆ ಶಿಕ್ಷಣ ನೀಡಲು ಸಾಮರ್ಥ್ಯ ನಿರ್ಮಾಣ ಕಾರ್ಯಕ್ರಮಗಳನ್ನು ಪರಿಚಯಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ.

<><*<><>*><>

ಮನ್ರೇಗಾ ಯೋಜನೆಯಡಿ ನಡೆಸಿದ ವಹಿವಾಟುಗಳಲ್ಲಿ ಶೇಕಡ ೯೭ ರಷ್ಟು ಪಾವತಿಗಳನ್ನು ಆಧಾರ್ ಪಾವತಿ ಸೇತುವೆ ವ್ಯವಸ್ಥೆ-ಎಪಿಬಿಎಸ್ ಮೂಲಕ ರವಾನಿಸಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ನೀಡಿದ ಲಿಖಿತ ಉತ್ತರದಲ್ಲಿ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಪ್ರಸಕ್ತ ಆರ್ಥಿಕ ವರ್ಷದಲ್ಲಿ ಮನ್ರೇಗಾ ಯೋಜನೆಯಡಿಯಲ್ಲಿ ಮಾಡಿದ ೩೫ ಕೋಟಿ ವ್ಯವಹಾರಗಳ ಪೈಕಿ ಸುಮಾರು ೩೪.೪೫ ಕೋಟಿ ವ್ಯವಹಾರಗಳನ್ನು ಎಪಿಬಿಎಸ್ ಮೂಲಕ ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಕರ್ನಾಟಕ, ಆಂಧ್ರಪ್ರದೇಶ, ಉತ್ತರಪ್ರದೇಶ, ಬಿಹಾರ, ಕೇರಳ ಮತ್ತು ಸಿಕ್ಕಿಂನಲ್ಲಿ ಈ ಹೊಸ ಡಿಜಿಟಲ್ ಪಾವತಿ ವ್ಯವಸ್ಥೆ ಮೂಲಕ ಶೇಕಡ ೯೯ ಕ್ಕಿಂತ ಹೆಚ್ಚು ಪಾವತಿ ಮಾಡಿರುವುದರಿಂದ ಎಬಿಪಿಎಸ್ ವ್ಯವಸ್ಥೆ ಅನುಷ್ಠಾನದಲ್ಲಿ ಈ ರಾಜ್ಯಗಳು ಅಗ್ರಸ್ಥಾನದಲ್ಲಿವೆ ಎಂದು ವಿವರಿಸಿದರು.

<><*<><>*><>

ಬೆಳೆಗಳು, ಹವಾಮಾನ ಮತ್ತು ನೀರಿನ ಮಾಹಿತಿಯನ್ನು ಸಂಗ್ರಹಿಸಲು, ೨ ಸಾವಿರದ ೮೧೭ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಡಿಜಿಟಲ್ ಕೃಷಿ ಮಿಷನ್ ಅನ್ನು ಕೇಂದ್ರ ಸಚಿವ ಸಂಪುಟ ಅನುಮೋದಿಸಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಲೋಕಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯವನ್ನು ರಾಜ್ಯಗಳೊಂದಿಗೆ ಸಮನ್ವಯಗೊಳಿಸಲಾಗಿದ್ದು, ಪ್ರಮುಖ ಕೃಷಿ ಮಾಹಿತಿಯ ಕುರಿತು ಸಮಗ್ರ ಜಿಯೋಸ್ಪೇಷಿಯಲ್ ವ್ಯವಸ್ಥೆಯನ್ನು ರಚಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

**<><*<><>*><>**

ಸಿಟಿಜನ್ ಫೈನಾನ್ಷಿಯಲ್ ಸೈಬರ್ ಫ್ರಾಡ್ ರಿಪೋರ್ಟಿಂಗ್ ಅಂಡ್ ಮ್ಯಾನೇಜ್‌ಮೆಂಟ್ ಸಿಸ್ಟಮ್ ಅಡಿಯಲ್ಲಿ ಬ್ಯಾಂಕ್‌ಗಳು ಮತ್ತು ಹಣಕಾಸು ಸಂಸ್ಥೆಗಳ ಸಹಯೋಗದೊಂದಿಗೆ ಶಂಕಿತ ಸೈಬರ್ ಅಪರಾಧಿಗಳ ನೋಂದಣಿಯನ್ನು ಪ್ರಾರಂಭಿಸಲಾಗಿದೆ ಎಂದು ಕೇಂದ್ರ ಇಂದು ತಿಳಿಸಿದೆ. ಲೋಕಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಕೇಂದ್ರ ಗೃಹ ವ್ಯವಹಾರಗಳ ಖಾತೆ ಸಹಾಯಕ ಸಚಿವ ನಿತ್ಯಾನಂದ ರೈ, ಈ ಉಪಕ್ರಮವು ೫.೬ ಲಕ್ಷಕ್ಕೂ ಹೆಚ್ಚು ಮೋಸದ ವಹಿವಾಟುಗಳನ್ನು ಕಡಿಮೆ ಮಾಡುವ ಮೂಲಕ ಒಂದು ಸಾವಿರದ ೪೦೦ ಕೋಟಿ ರೂಪಾಯಿಗಳಿಗಿಂತ ಹೆಚ್ಚು ಹಣವನ್ನು ಉಳಿಸಿದೆ ಎಂದು ಹೇಳಿದರು.  ಈ ಯೋಜನೆ ಅಡಿಯಲ್ಲಿ ಮೇವಾತ್, ಜಮ್ತಾರಾ, ಅಹಮದಾಬಾದ್, ಹೈದರಾಬಾದ್, ಚಂಡೀಗಢ, ವಿಶಾಖಪಟ್ಟಣ ಮತ್ತು ಗುವಾಹಟಿ ಸೇರಿ ಒಟ್ಟು ಏಳು ಜಂಟಿ ಸೈಬರ್ ಸಮನ್ವಯ ತಂಡಗಳನ್ನು ರಚಿಸಲಾಗಿದೆ ಎಂದು ತಿಳಿಸಿದರು.

**<><*<><>*><>**

ರಾಜ್ಯಸಭಾ ಸಭಾಧ್ಯಕ್ಷ ಜಗದೀಪ್ ಧನ್‌ಕರ್ ಅವರು, ಸದನದಲ್ಲಿ ಪಕ್ಷಪಾತ ಮಾಡುತ್ತಿದ್ದಾರೆ ಎಂದು ಆರೋಪಿಸಿ ಪ್ರತಿಪಕ್ಷಗಳು ಅವಿಶ್ವಾಸ ನಿರ್ಣಯ ಮಂಡಿಸಿದೆ. ಈ ಕುರಿತು ರಾಜ್ಯಸಭೆಯ ಪ್ರಧಾನ ಕಾರ್ಯದರ್ಶಿಗಳಿಗೆ ನೋಟಿಸ್ ಸಲ್ಲಿಸಲಾಗಿದೆ ಎಂದು ಕಾಂಗ್ರೆಸ್ ಸಂಸದ ಜೈರಾಮ್ ರಮೇಶ್ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ಕಲಾಪವನ್ನು ಏಕಪಕ್ಷೀಯವಾಗಿ ನಡೆಸಿದ್ದಕ್ಕಾಗಿ ರಾಜ್ಯಸಭಾ ಸಭಾಧ್ಯಕ್ಷರ ವಿರುದ್ಧ ಅವಿಶ್ವಾಸ ನಿರ್ಣಯ ಕೈಗೊಳ್ಳುವುದನ್ನು ಬಿಟ್ಟು, ಕಾಂಗ್ರೆಸ್ ಸೇರಿದಂತೆ ಐಎನ್‌ಡಿಐ ಒಕ್ಕೂಟಕ್ಕೆ ಸೇರಿದ ಪಕ್ಷಗಳಿಗೆ ಬೇರೆ ಆಯ್ಕೆ ಇರಲಿಲ್ಲ. ಸಂಸದೀಯ ಪ್ರಜಾಪ್ರಭುತ್ವದ ಹಿತದೃಷ್ಟಿಯಿಂದ ಪ್ರತಿಪಕ್ಷಗಳು ಈ ಕ್ರಮ ಕೈಗೊಂಡಿವೆ ಎಂದು ಜೈರಾಮ್ ರಮೇಶ್ ಹೇಳಿದ್ದಾರೆ.

**<><*<><>*><>**

ರಾಜ್ಯಸಭಾ ಸಭಾಧ್ಯಕ್ಷ ಜಗದೀಪ್ ಧನ್‌ಕರ್ ಅವರು, ಸದನದಲ್ಲಿ ಪಕ್ಷಪಾತ ಮಾಡುತ್ತಿದ್ದಾರೆ ಎಂದು ಆರೋಪಿಸಿ ಪ್ರತಿಪಕ್ಷಗಳು ಅವಿಶ್ವಾಸ ನಿರ್ಣಯ ಮಂಡಿಸಿದೆ. ಈ ಕುರಿತು ರಾಜ್ಯಸಭೆಯ ಪ್ರಧಾನ ಕಾರ್ಯದರ್ಶಿಗಳಿಗೆ ನೋಟಿಸ್ ಸಲ್ಲಿಸಲಾಗಿದೆ ಎಂದು ಕಾಂಗ್ರೆಸ್ ಸಂಸದ ಜೈರಾಮ್ ರಮೇಶ್ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ಕಲಾಪವನ್ನು ಏಕಪಕ್ಷೀಯವಾಗಿ ನಡೆಸಿದ್ದಕ್ಕಾಗಿ ರಾಜ್ಯಸಭಾ ಸಭಾಧ್ಯಕ್ಷರ ವಿರುದ್ಧ ಅವಿಶ್ವಾಸ ನಿರ್ಣಯ ಕೈಗೊಳ್ಳುವುದನ್ನು ಬಿಟ್ಟು, ಕಾಂಗ್ರೆಸ್ ಸೇರಿದಂತೆ ಐಎನ್‌ಡಿಐ ಒಕ್ಕೂಟಕ್ಕೆ ಸೇರಿದ ಪಕ್ಷಗಳಿಗೆ ಬೇರೆ ಆಯ್ಕೆ ಇರಲಿಲ್ಲ. ಸಂಸದೀಯ

ಪ್ರಜಾಪ್ರಭುತ್ವದ ಹಿತದೃಷ್ಟಿಯಿಂದ ಪ್ರತಿಪಕ್ಷಗಳು ಈ ಕ್ರಮ ಕೈಗೊಂಡಿವೆ ಎಂದು ಜೈರಾಮ್ ರಮೇಶ್ ಹೇಳಿದ್ದಾರೆ.

<><*<><>*><>

ಇಂದು ಮಾನವ ಹಕ್ಕುಗಳ ದಿನವನ್ನು ಆಚರಿಸಲಾಯಿತು. ಮಾನವ ಹಕ್ಕುಗಳ ಸಾರ್ವತ್ರಿಕ ಘೋಷಣೆಯ ನೆನಪಿಗಾಗಿ ಪ್ರತಿವರ್ಷ ಡಿಸೆಂಬರ್ ೧೦ ರಂದು ಈ ದಿನವನ್ನು ಆಚರಿಸಲಾಗುತ್ತದೆ. ಈ ಘೋಷಣೆಯನ್ನು ೧೯೪೮ ರಲ್ಲಿ ವಿಶ್ವ ಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಅಂಗೀಕರಿಸಲಾಯಿತು. ಈ ವರ್ಷದ ಘೋಷವಾಕ್ಯವು "ನಮ್ಮ ಹಕ್ಕುಗಳು, ನಮ್ಮ ಭವಿಷ್ಯ, ಈಗ" ಎಂಬುದಾಗಿದೆ. ಮಾನವ ಹಕ್ಕುಗಳು ಕೇವಲ ಮಹತ್ವಾಕಾಂಕ್ಷೆ ಮಾತ್ರವಲ್ಲ, ಉತ್ತಮ ಭವಿಷ್ಯವನ್ನು ರಚಿಸಲು ವ್ಯಕ್ತಿಗಳು ಮತ್ತು ಸಮುದಾಯಗಳನ್ನು ಸಬಲೀಕರಣಗೊಳಿಸುವ ಪ್ರಾಯೋಗಿಕ ಸಾಧನವಾಗಿದೆ ಎಂದು ಘೋಷವಾಕ್ಯ ಹೇಳುತ್ತದೆ.

<><*<><>*><>

ಬಡತನ ನಿರ್ಮೂಲನೆ, ಹಸಿವು ನಿರ್ಮೂಲನೆ ಮತ್ತು ಯುವಕರಿಗೆ ಸಮಾನ ಅವಕಾಶಗಳನ್ನು ಕಲ್ಪಿಸುವ ನೀತಿಗಳನ್ನು ಜಾರಿಗೊಳಿಸುವುದರೊಂದಿಗೆ ಭಾರತ ವಿಶ್ವದ ಮುಂದೆ ಪ್ರಕಾಶಮಾನವಾದ ಉದಾಹರಣೆಯಾಗಿ ನಿಂತಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ದೆಹಲಿಯಲ್ಲಿ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಆಯೋಜಿಸಿದ್ದ ಮಾನವ ಹಕ್ಕುಗಳ ದಿನಾಚರಣೆಯನ್ನುದ್ದೇಶಿಸಿ ಮಾತನಾಡಿದ ರಾಷ್ಟ್ರಪತಿ, ೫ ಸಾವಿರ ವರ್ಷಗಳಿಗಿಂತಲೂ ಹೆಚ್ಚಿನ ನಾಗರಿಕ ಪರಂಪರೆಯನ್ನು ಹೊಂದಿರುವ ಭಾರತವು ಸಹಾನುಭೂತಿ ಮತ್ತು ಸಾಮರಸ್ಯದ ಸಮುದಾಯದೊಳಗಿನ ವ್ಯಕ್ತಿಗಳ ಪರಸ್ಪರ ಸಂಪರ್ಕದ ಮೌಲ್ಯಗಳನ್ನು ದೀರ್ಘಕಾಲದಿಂದ ಎತ್ತಿಹಿಡಿದಿದೆ ಎಂದು ಒತ್ತಿ ಹೇಳಿದರು. ಧ್ವನಿಯಿಲ್ಲದವರ ಧ್ವನಿಯಾಗಲು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಮತ್ತು ನ್ಯಾಯಾಂಗ ಮತ್ತು ಪ್ರಮುಖ ಮಧ್ಯಸ್ಥಗಾರರು ಸೇರಿದಂತೆ ಇತರ ಆಯೋಗಗಳ ದಣಿವರಿಯದ ಪ್ರಯತ್ನಗಳನ್ನು ಅವರು ಶ್ಲಾಘಿಸಿದರು. ಎಲ್ಲರಿಗೂ ಮಾನವ ಹಕ್ಕುಗಳನ್ನು ಖಾತ್ರಿಪಡಿಸುವ ನಿಟ್ಟಿನಲ್ಲಿ ಅವರ ದೃಢ ಬದ್ಧತೆ ಮತ್ತು ಅವಿರತ ಪ್ರಯತ್ನಗಳಿಗಾಗಿ ಅವರನ್ನು ರಾಷ್ಟ್ರಪತಿ ಅಭಿನಂದಿಸಿದರು.

<><*<><>*><>

ಸಾಮಾನ್ಯ ವಿಶ್ವವಿದ್ಯಾಲಯ ಪ್ರವೇಶ ಪರೀಕ್ಷೆ-ಯುಜಿ ಅನ್ನು ೨೦೨೫ ರಿಂದ ಕಂಪ್ಯೂಟರ್ ಆಧಾರಿತ ಪರೀಕ್ಷೆ-ಸಿಬಿಟಿ ರೂಪದಲ್ಲಿ ಮಾತ್ರ ನಡೆಸಲಾಗುವುದು. ೧೨ನೇ ತರಗತಿಯಲ್ಲಿ ಅಧ್ಯಾಯನ ಮಾಡಿದ ವಿಷಯಗಳ ಹೊರತಾಗಿಯೂ ಯಾವುದೇ ವಿಷಯದಲ್ಲಿ ಸಿಯುಇಟಿ-ಯುಜಿ ಪರೀಕ್ಷೆಗೆ ಹಾಜರಾಗಲು ಅವಕಾಶ ನೀಡಲಾಗುತ್ತಿದೆ. ೨೦೨೫ ರಿಂದ ೩೭ ವಿಷಯಗಳ ಬದಲಾಗಿ ೬೩ ವಿಷಯಗಳಲ್ಲಿ ಸಿಯುಇಟಿ-ಯುಜಿ ಪರೀಕ್ಷೆ ನಡೆಸಲಾಗುವುದು ಎಂದು ವಿಶ್ವವಿದ್ಯಾಲಯ ಧನ ಸಹಾಯ ಆಯೋಗದ ಅಧ್ಯಕ್ಷ ಎಂ.ಜಗದೀಶ್ ತಿಳಿಸಿದ್ದಾರೆ.

<><*<><>*><>

ಎಎಸ್‌ಸಿ ಮೋಟಾರ್‌ಸೈಕಲ್ ಪ್ರದರ್ಶನ ತಂಡ-ಟೊರ್ನಾಡೋಸ್, ಒಂದೇ ದಿನದಲ್ಲಿ ಇಂದು ಮೂರು ವಿಶ್ವ ದಾಖಲೆಗಳನ್ನು ನಿರ್ಮಿಸಿದೆ. ಸುಬೇದಾರ್ ಪ್ರದೀಪ್ ಎಸ್.ಎಸ್. ೩೬೧.೫೬ ಕಿಲೋ ಮೀಟರ್ ಮೋಟಾರ್‌ಸೈಕಲ್‌ನಲ್ಲಿ ಲಾಂಗೆಸ್ಟ್ ಬ್ಯಾಕ್‌ವರ್ಡ್ ರೈಡ್ ವಿಭಾಗದಲ್ಲಿ ವಿಶ್ವದಾಖಲೆಯನ್ನು ನಿರ್ಮಿಸಿದ್ದಾರೆ. ಹವಾಲ್ದಾರ್ ಮನೀಷ್ ೨.೩೪೯ ಕಿಲೋ ಮೀಟರ್ ದೂರವನ್ನು ಕ್ರಮಿಸುವ ಮೂಲಕ ಅತಿ ಉದ್ದದ ಬೇಸಿಕ್ ಹ್ಯಾಂಡ್ಸ್ ಫ್ರೀ ವೀಲಿ ವಿಭಾಗದಲ್ಲಿ ವಿಶ್ವ ದಾಖಲೆಯನ್ನು ಮುರಿದರು ಮತ್ತು ದೀರ್ಘಾವಧಿಯ ಹ್ಯಾಂಡ್ಸ್ ವೀಲಿ ವಿಭಾಗದಲ್ಲಿ ಸಿಪಸುಮಿತ್ ತೋಮರ್ ಅವರು ಒಂದು ಸಾವಿರದ ೭೧೫.೪ ಮೀಟರ್‌ನ ಹೊಸ ದಾಖಲೆಯನ್ನು ಮಾಡಿದ್ದಾರೆ. ಗಿನ್ನಿಸ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್‌ನ ಮಾರ್ಗಸೂಚಿಗಳ ಪ್ರಕಾರ ಬೆಂಗಳೂರು ಮತ್ತು ಚೆನ್ನೈ ಎಕ್ಸ್‌ಪ್ರೆಸ್ ವೇನಲ್ಲಿ ಈ ಸಾಧನೆಗಳನ್ನು ಮಾಡಲಾಯಿತು.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>